ದಿನಾಂಕ 22-02-2023 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

ಮುಖ್ಯ ವಿಚಾರಣೆ : ಪ್ರತಿವಾದಿ ಪರ ಶ್ರೀ.ಎಸ್.ಎಂ.ಆರ್. ವಕೀಲರಿಂದ

ನನ್ನ ಮುಖ್ಯ ವಿಚಾರಣೆ ಭಾಗವಾಗಿ ಪ್ರಮಾಣ ಪತ್ರದ ಮೂಲಕ ನ್ಯಾಯಾಲಯದ ಮುಂದೆ ಸಲ್ಲಿಸಿರುತ್ತೇನೆ. ಸದರಿ, ಪ್ರಮಾಣ ಪತ್ರದಲ್ಲಿ ಬರೆದಿರುವ ವಿಷಯಗಳು ನಾನೇ ಬರೆಸಿರುತ್ತೇನೆ. ನನ್ನ ಪ್ರಮಾಣ ಪತ್ರದಲ್ಲಿ ಹೇಳಿರುವ ಎಲ್ಲಾ ಅಂಶಗಳು ಸತ್ಯವಾಗಿರುತ್ತವೆ. ಅದರಲ್ಲಿರುವ ಸಹಿ ನನ್ನದೇ.

ಸಾಕ್ಷಿಯು ದಿ: 28-06-2022 ರ ಮೌಲ್ಯಮಾಪನ ಗೈಡ್‌ಲೈನ್ ಪ್ರತಿಯನ್ನು ನೋಡಿ ಗುರುತಿಸಿದ್ದು, ಅದನ್ನು ಈಗಾಗಲೇ ನಿ.ಡಿ. 1 ಎಂದು ಗುರುತಿಸಲಾಗಿದೆ.

ಪಹಣಿ ಪತ್ರಿಕೆಗಳನ್ನು ನೋಡಿ ಗುರುತಿಸಿದ್ದು, ಅವುಗಳನ್ನು ಈಗಾಗಲೇ ನಿ.ಡಿ. 2 ರಿಂದ 4 ಎಂದು ಗುರುತಿಸಲಾಗಿದೆ.

ಬೆಳೆ ದೃಢೀಕರಣ ಪತ್ರವನ್ನು ನೋಡಿ ಗುರುತಿಸಿದ್ದು, ಅದನ್ನು ನಿ.ಡಿ. 5 ಎಂದು ಗುರುತಿಸಲಾಯಿತು.

ದಿ: 16-10-1990 ರ ಕ್ರಯ ಪತ್ರವನ್ನು ನೋಡಿ ಗುರುತಿಸಿದ್ದು, ಅದನ್ನು ನಿ.ಡಿ. 6 ಎಂದು ಗುರುತಿಸಲಾಯಿತು.

ಪಾಟೀ ಸವಾಲು : ಶ್ರೀ. ವಕೀಲರಿಂದ

ಈ ಹಂತದಲ್ಲಿ ವಾದಿ ಪರ ವಕೀಲರು ಪಾಟೀ ಸವಾಲು ಮಾಡಲು ಕಾಲಾವಕಾಶ ಕೋರಿದ್ದು, ಅನುಮತಿಸಲಾಯಿತು.

(ನನ್ನ ಉಕ್ತದ ಹೇಳಿಕೆಯಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿರುತ್ತಾರೆ)

ಓ. ಹೇ. ಕೇ. ಸರಿ ಇದೆ,

2 ನೇ ಅಪರ ಸಿಜೆ & ಜೆಎಂಎಫ್‌ಸಿ, ನ್ಯಾಯಾಲಯ, ಸಿಂಧನೂರು.